**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ರವಿ ರವರು ನಿಯಮ 330 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ ನೀಡುವ ಬಗ್ಗೆ.**

ಪ್ರಶ್ನೆ:

ಸರ್ಕಾರದ ಆದೇಶ ಸಂಖ್ಯೆ:ನಅಇ/362/ಬೆಂರೂಪ್ರಾ/2010 ದಿನಾಂಕ:18.12.2010 ಮತ್ತು ದಿನಾಂಕ:15.03.2011 ರಂತೆ ನರಹಂತಕ ವೀರಪ್ಪನ್ ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಎಸ್ ಟಿ ಎಫ್ ಅಧಿಕಾರಿ/ ಸಿಬ್ಬಂದಿ ವರ್ಗದವರಿಗೆ ರಾಜ್ಯದ ವಿವಿಧ ಭಾಗಗಳಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳಿಂದ ನಿವೇಶನ ಮಂಜೂರು ಮಾಡಲಾಗಿದೆ. ಈ ಪೈಕಿ ಹಲವಾರು ಫಲಾನುಭವಿಗಳಿಗೆ ನಿವೇಶನಗಳನ್ನು ಸಹ ನೋಂದಣಿ ಮಾಡಿಕೊಡಲಾಗಿದ್ದು, ಕಾರಣಾಂತರಗಳಿಂದ ಇನ್ನೂ ಕೆಲವು ಫಲಾನುಭವಿಗಳು ನಿವೇಶನಗಳನ್ನು ನೋಂದಣಿ ಮಾಡಿಕೊಳ್ಳಲಾಗದೇ ಪರಿತಪಿಸುತ್ತಿರುವ ಬಗ್ಗೆ.

*****

ಉತ್ತರ:

ನರಹಂತಕ ವೀರಪ್ಪನ್ ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಎಸ್.ಟಿ.ಎಫ್. ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ವಿವಿಧ ಬಡಾವಣೆಗಳಲ್ಲಿ ಸರ್ಕಾರದ ಆದೇಶ ಸಂಖ್ಯೆ.ನಅಇ/362/ಬೆಂರೂಪ್ರಾ/2010 ದಿನಾಂಕ:18.12.2010 ಮತ್ತು ದಿನಾಂಕ:15.03.2011 ರಂತೆ ಒಟ್ಟು 245 ನಿವೇಶನಗಳನ್ನು ಹಂಚಿಕೆ ಮಾಡಿದ್ದು, ಸದರಿ ನಿವೇಶನಗಳನ್ನು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ನಿವೇಶನಗಳ ಹಂಚಿಕೆ) ನಿಯಮಗಳು, 1991 ರನ್ವಯ ಮಂಜೂರು ಮಾಡಲಾಗಿರುತ್ತದೆ. ಪ್ರಸ್ತುತ 28 ಮಂಜೂರಾತಿದಾರರಿಗೆ ಪ್ರಾಧಿಕಾರದಿಂದ ನಿವೇಶನಗಳ ಹಕ್ಕುಪತ್ರಗಳನ್ನು ವಿತರಿಸಲಾಗಿದೆ. ಇನ್ನುಳಿದ 217 ಮಂಜೂರಾತಿದಾರರ ನಿವೇಶನಗಳಿಗೆ ಕ್ರಯಪತ್ರ ನೀಡಲು ಬಾಕಿ ಇರುತ್ತದೆ. ನಿವೇಶನದ ಬಾಬ್ತು ಪೂರ್ಣಹಣ ಪಾವತಿಸಿರುವ ಮಂಜೂರಾತಿದಾರರಿಗೆ ಗುತ್ತಿಗೆ ಕರಾರು ಪತ್ರವನ್ನು ನೋಂದಾಯಿಸಿ, ಸ್ವಾಧೀನ ಪತ್ರವನ್ನು ನೀಡಲಾಗಿದ್ದು, ಸದರಿ ನಿವೇಶನಗಳಲ್ಲಿ ಮಂಜೂರಾತಿದಾರರು ಮಂಜೂರಾತಿ ಷರತ್ತಿನಂತೆ ಕಟ್ಟಡ ನಿರ್ಮಿಸಿರುವ ಪ್ರಕರಣಗಳಿಗೆ ಹಕ್ಕುಪತ್ರವನ್ನು ನೀಡಲಾಗುವುದು.

---

ನಅಇ 59 ಮೈಅಪ್ರಾ 2023

(ಬಿ.ಎಸ್.ಬಸವರಾಜು)
ನಗರಾಭಿವೃದ್ಧಿ ಸಚಿವರು